ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

41

ಇಲಾಖೆ / ವಿಷಯ : DEPARTMENT / SUBJECT: ಸಂಸತ್ತು ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE 16/12/20

# ಸಂಸತ್ತಿನ ಚಳಿಗಾಲದ ಅಧಿವೇಶನ ಮೊಟಕು: ಕಾಂಗ್ರೆಸ್ ಆಕ್ಷೇಪ

ಕ. ಪ್ರಭ 16/12/20

**ನವದೆಹಲಿ:** ಕೊರೋನಾ ಹಿನ್ನೆಲೆಯಲ್ಲಿ ಸಂಸತ್ತಿನ ಚಳಿಗಾಲದ ಅಧಿವೇಶನ ರದ್ದುಗೊಳಿಸಿ ಬಜೆಟ್ ಅಧಿವೇಶನದಲ್ಲಿ ವಿಲೀನಗೊಳಿಸಲು ಸರ್ಕಾರ ತೀರ್ಮಾನಿಸಿದೆ. ಈ ಸಂಬಂಧ ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಶಿ, ವಿವಿಧ ರಾಜಕೀಯ ಪಕ್ಷಗಳಿಂದ ಅಭಿಪ್ರಾಯ ಸಂಗ್ರಹಿಸಿದ್ದರು. ಈ ವೇಳೆ ಅಧಿವೇಶನವನ್ನು ನಡೆಸದಂತೆ ಸರ್ಕಾರಕ್ಕೆ ಸಲಹೆ ನೀಡಲಾಗಿತ್ತು. ಆದರೆ, ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿರುವ ಕಾಂಗ್ರೆಸ್, ಚಳಿಗಾಲದ ಅಧಿವೇಶವನ್ನು ಮೊಟಕುಗೊಳಿಸುವುದಕ್ಕೂ ಮುನ್ನ ಸರ್ಕಾರ ವಿಪಕ್ಷಗಳನ್ನು ವಿಶ್ವಾಸಕ್ಕೆ ಪಡೆದಿಲ್ಲ. ಏಕಪಕ್ಷೀಯವಾಗಿ ಸರ್ಕಾರ ನಿರ್ಧಾರ ಕೈಗೊಂಡಿದೆ ಎಂದು ಆರೋಪಿಸಿದೆ.